ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ವನ್ಯಜೀವಿಗಳ ಹಾವಳಿ ತಡೆಗಟ್ಟುವ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

957 (1043) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಆನೆ ತುಳಿತದಿಂದ ಉಂಟಾದ ಬೆಳೆಹಾನಿ ವಿವರ ನೀಡುವುದು ; ಹಾಗೂ ಬೆಳೆ ಹಾನಿ ಸಂತ್ರಸ್ಥರಿಗೆ ಸರ್ಕಾರ ನೀಡಿರುವ ಪರಿಹಾರದ ವಿವರ ನೀಡುವುದು ;

(ಆ) ವನ್ಯ ಜೀವಿಗಳು ಅರಣ್ಯ ದಾಟದಂತೆ ತಡೆಯಲು ರೈಲ್ವೇ ಹಳಿಗಳು ಹಾಗೂ ಸೋಲಾರ್ ಫೆನ್ಸಿಂಗ್‌ಗಳನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಸದರಿ ಕಾರ್ಯಗಳಿಗೆ ಮಂಜೂರಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ; ಬಾಕಿ ಉಳಿಯಲು ಕಾರಣಗಳೇನು ; (ಉಪ ವಿಭಾಗವಾರು, ವಾರ್ಷಿಕವಾರು ಕಾಮಗಾರಿ ಸಹಿತ ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ವನ್ಯ ಮೃಗಗಳ ಕಳ್ಳಬೇಟೆ ಮತ್ತು ಅರಣ್ಯ ಸಂಪತ್ತು ಲೂಟಿ ನಡೆಸುತ್ತಿರುವವರ ವಿರುದ್ಧ ದಾಖಲಾಗಿರುವ ಕೇಸುಗಳೆಷ್ಟು ? (ವಿವರ ನೀಡುವುದು)